# ಕರ್ನಾಟಕ ವಿಧಾನ ಪರಿಷತ್ತು

| | | | |
|---|---|---|---|
| 1 | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 160 |
| 2 | ಸದಸ್ಯರ ಹೆಸರು | : | ಶ್ರೀ ಎಂ.ನಾರಾಯಣಸ್ವಾಮಿ |
| 3 | ಉತ್ತರಿಸುವ ದಿನಾಂಕ | : | 10-07-2018 |
| 4 | ಉತ್ತರಿಸುವವರು | : | ಉಪ ಮುಖ್ಯಮಂತ್ರಿಗಳು |

| ಕ್ರಸಂ | ಪ್ರಶ್ನೆ | ಉತ್ತರ |
|---|---|---|
| ಅ | ಬೆಂಗಳೂರು ನಗರವನ್ನು ಪ್ಲಾಸ್ಟಿಕ್ ಮತ್ತು ಫ್ಲೆಕ್ಸ್ ಮುಕ್ತ ನಗರವನ್ನಾಗಿ ಮಾಡುವ ಯೋಜನೆ ಸರ್ಕಾರದ ಮುಂದಿದೆಯೇ; | ಸರ್ಕಾರದ ಅಧಿಸೂಚನೆ ಸಂಖ್ಯೆ: ಅಪಜೀ 17 ಇಪಿಸಿ 2012, ದಿನಾಂಕ: 11-03-2016 ರಲ್ಲಿ ಪ್ಲಾಸ್ಟಿಕ್ ಕ್ಯಾರಿ ಬ್ಯಾಗ್, ಪ್ಲಾಸ್ಟಿಕ್ ಭಿತ್ತಿಪತ್ರ, ಪ್ಲಾಸ್ಟಿಕ್ ತೋರಣ, ಫ್ಲೆಕ್ಸ್, ಪ್ಲಾಸ್ಟಿಕ್ ಬಾವುಟ, ಪ್ಲಾಸ್ಟಿಕ್ ತಟ್ಟೆ, ಪ್ಲಾಸ್ಟಿಕ್ ಲೋಟ, ಪ್ಲಾಸ್ಟಿಕ್ ಚಮಚ, ಕ್ಲಿಂಗ್ ಫಿಲ್ಮ್ ಮತ್ತು ಊಟದ ಮೇಜಿನ ಮೇಲೆ ಹರಡುವ ಪ್ಲಾಸ್ಟಿಕ್ ಹಾಳೆ ಹಾಗೂ ಥರ್ಮೋಕೋಲ್ ಮತ್ತು ಪ್ಲಾಸ್ಟಿಕ್ ಮೈಕ್ರೋ ಬೀಡ್ಸ್‌ನಿಂದ ತಯಾರಾದಂತಹ ಮೇಲ್ಕಂಡ ವಸ್ತುಗಳ ತಯಾರಿಕೆ, ಸರಬರಾಜು, ಸಂಗ್ರಹಣೆ, ಸಾಗಾಣಿಕೆ, ಮಾರಾಟ ಮತ್ತು ವಿತರಣೆ ಮಾಡುವುದನ್ನು ಹಾಗೂ ಬಳಕೆಯನ್ನು ರಾಜ್ಯದಾದ್ಯಂತ ನಿಷೇಧಿಸಲಾಗಿದೆ.<br><br>ಈ ನಿರ್ದೇಶನವನ್ನು ಜಾರಿಗೊಳಿಸಲು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಆಯುಕ್ತರು, ಜಂಟಿ ಆಯುಕ್ತರುಗಳು, ಕಂದಾಯ ಅಧಿಕಾರಿಗಳು, ಪಾಲಿಕೆಯ ಎಲ್ಲಾ ಸಾರ್ವಜನಿಕ ಆರೋಗ್ಯ ಅಧಿಕಾರಿಗಳು ಮತ್ತು ಎಲ್ಲಾ ಅಭಿಯಂತರರುಗಳಿಗೆ ಅಧಿಕಾರವನ್ನು ನೀಡಲಾಗಿರುತ್ತದೆ. |
| ಆ | ಬೆಂಗಳೂರು ನಗರದಲ್ಲಿ ಫ್ಲೆಕ್ಸ್‌ಗಳ ಹಾವಳಿ ನಿರಂತರವಾಗಿರುವುದರಿಂದ ರಾಜಕೀಯ ಪಕ್ಷಗಳ, ಹುಟ್ಟು ಹಬ್ಬದ ಮತ್ತು ಶ್ರದ್ಧಾಂಜಲಿಗಳ ಭಾವಚಿತ್ರಗಳು ಇಡೀ ಬೆಂಗಳೂರನ್ನು ಆಕ್ರಮಿಸಿರುವುದರಿಂದ ಫ್ಲೆಕ್ಸ್ ಮುಕ್ತ ಬೆಂಗಳೂರು ಮಾಡಲು ಸರ್ಕಾರದ ಮುಂದಿರುವ ಕಾರ್ಯಕ್ರಮವೇನು; | |
| ಇ | ನಿಯಮಗಳನ್ನು ಉಲ್ಲಂಘಿಸಿರುವ ರಾಜಕೀಯ ಪಕ್ಷಗಳನ್ನು ಒಳಗೊಂಡಂತೆ ವೈಯಕ್ತಿಕ, ಸಂಘ ಸಂಸ್ಥೆಗಳ ಫ್ಲೆಕ್ಸ್ ಹಾವಳಿ ತಡೆಗಟ್ಟಲು ಸರ್ಕಾರ ಅನುಸರಿಸುತ್ತಿರುವ ಮಾರ್ಗಸೂಚಿಗಳು ಮತ್ತು ಮುಂಜಾಗ್ರತಾ ಕ್ರಮಗಳೇನು? | 1. ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಜಾಹೀರಾತು ಬೈಲಾ 2006 ಉಪವಿಧಿ 3ಐ(vii) ಇದರಂತೆ ವಿಧಾನಸೌಧ ಸುತ್ತಮುತ್ತ 500 ಮೀಟರ್ ಅಂತರದಲ್ಲಿ ಹಾಗೂ ಎಂ.ಜಿ.ರಸ್ತೆ, ಏರ್‌ಪೋರ್ಟ್ ರಸ್ತೆ, ಬ್ರಿಗೇಡ್ ರಸ್ತೆ, ಕಬ್ಬನ್‌ರಸ್ತೆ, ಕಾಮರಾಜರಸ್ತೆ ಮತ್ತು ಡಿಕೆನ್‌ಸನ್ ರಸ್ತೆ ಜಂಕ್ಷನ್ ಪಾಲಿಕೆಯ ಕೇಂದ್ರ ಕಛೇರಿ ಎದುರು ಕೆ.ಆರ್.ರಸ್ತೆ, ಹಡ್ಸನ್‌ವೃತ್ತ, ಬಸವೇಶ್ವರ ವೃತ್ತ, ಕೆ.ಜಿ.ವೃತ್ತ, ಸರ್ಕಾರಿ ಕಛೇರಿಗಳ ಆವರಣಗಳಲ್ಲಿ ಫ್ಲೆಕ್ಸ್ ಬ್ಯಾನರ್‌ಗಳ ಪ್ರದರ್ಶನಗಳನ್ನು ನಿಷೇಧಿಸಲಾಗಿದೆ.<br><br>2. ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿ ಅನಧಿಕೃತ ಫ್ಲೆಕ್ಸ್ ಮತ್ತು ಬ್ಯಾನರ್‌ಗಳನ್ನು ತಡೆಗಟ್ಟುವ ನಿಟ್ಟಿನಲ್ಲಿ ಸತತವಾಗಿ ಪ್ರತಿ ದಿನ ರಾತ್ರಿ ಪಾಳಿಯಲ್ಲಿ ಸಹಾಯಕ ಕಾರ್ಯಪಾಲಕ ಅಭಿಯಂತರರ ನೇತೃತ್ವದಲ್ಲಿ ಪ್ರಹರಿ ತಂಡಗಳನ್ನು ರಚಿಸಿ, ಪೊಲೀಸ್ ಭದ್ರತೆಯೊಂದಿಗೆ ತೆರವು ಕಾರ್ಯಾಚರಣೆ ನಡೆಸಲಾಗುತ್ತಿದೆ. ಅನಧಿಕೃತ ಫ್ಲೆಕ್ಸ್ ಮತ್ತು ಬ್ಯಾನರ್ ಹಾವಳಿಯನ್ನು ತಡೆಗಟ್ಟಲು ಹಾಗೂ ತೆರವು ಕಾರ್ಯಾಚರಣೆ ನಡೆಸಲು ಎಲ್ಲಾ ವಲಯದ ಅಪರ/ಜಂಟಿ ಆಯುಕ್ತರುಗಳಿಗೆ ಸೂಚಿಸಲಾಗಿರುತ್ತದೆ. |

| | | |
|---|---|---|
| | | 3. ಪ್ರತಿ ಶನಿವಾರ ವಿಶೇಷ ಸ್ವಚ್ಛತಾ ಆಂದೋಲನದ ಅಡಿಯಲ್ಲಿ ಸಹ ವಾರ್ಡ್‌ವಾರು ಅನಧಿಕೃತ ಫ್ಲೆಕ್ಸ್ ಮತ್ತು ಬ್ಯಾನರ್‌ಗಳ ತೆರವು ಕಾರ್ಯಾಚರಣೆಯನ್ನು ನಡೆಸಲಾಗುತ್ತಿದೆ.<br><br>4. ವಲಯವಾರು ಜಂಟಿ ಆಯುಕ್ತರ ಹಂತದಲ್ಲಿ ಪ್ರಿಂಟಿಂಗ್ ಪ್ರೆಸ್ ಮಾಲೀಕರು ಹಾಗೂ ಜಾಹೀರಾತು ಏಜೆನ್ಸಿದಾರರ ಸಭೆಗಳನ್ನು ಕರೆದು ಪಾಲಿಕೆಯಿಂದ ಪೂರ್ವಾನುಮತಿ ಪಡೆಯದೇ ಅನಧಿಕೃತ ಪ್ಯಾಂಪ್ಲೆಟ್ಸ್, ಫ್ಲೆಕ್ಸ್ ಮತ್ತು ಬ್ಯಾನರ್ಸ್‌ಗಳನ್ನು ಮುದ್ರಿಸಬಾರದೆಂದು ಎಚ್ಚರಿಕೆ ನೀಡಲಾಗಿರುತ್ತದೆ.<br><br>5. ಸಾರ್ವಜನಿಕ ವಲಯದಲ್ಲಿ ಫ್ಲೆಕ್ಸ್ ಮತ್ತು ಬ್ಯಾನರ್ಸ್‌ಗಳ ಹಾವಳಿ ಬಗ್ಗೆ ಹೆಚ್ಚು ಅರಿವು ಮೂಡಿಸಲು ಸ್ಥಳೀಯ ಚುನಾಯಿತ ಪ್ರತಿನಿಧಿಗಳು, ರೆಸಿಡೆನ್ಸಿಯಲ್ ವೆಲ್‌ಫೇರ್ ಅಸೋಸಿಯೇಷನ್ ಹಾಗೂ ಸಂಘ ಸಂಸ್ಥೆಗಳ ಸಹಯೋಗದಲ್ಲಿ ತೆರವು ಕಾರ್ಯಕ್ರಮಗಳನ್ನು ವಲಯದ ಎಲ್ಲಾ ಅಪರ/ಜಂಟಿ ಆಯುಕ್ತರು ನಿರಂತರವಾಗಿ ಕೈಗೊಳ್ಳಲಾಗುತ್ತಿದೆ.<br><br>6. ಅನಧಿಕೃತ ಫ್ಲೆಕ್ಸ್, ಬ್ಯಾನರ್ಸ್ ಅಳವಡಿಸಿರುವವರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಲು ಹಾಗೂ ಸಾರ್ವಜನಿಕ ಸ್ಥಳಗಳಲ್ಲಿ ಫ್ಲೆಕ್ಸ್ ಮತ್ತು ಬ್ಯಾನರ್ಸ್‌ಗಳನ್ನು ಅಳವಡಿಸುತ್ತಿರುವವರ ವಿರುದ್ಧ ಕರ್ನಾಟಕ ಮುಕ್ತ ಸ್ಥಳಗಳು (ವಿರೂಪಗೊಳಿಸುವಿಕೆ ತಡೆ) ಕಾಯ್ದೆ 1981ರ ಅಡಿಯಲ್ಲಿ ಪ್ರಕರಣಗಳನ್ನು ದಾಖಲಿಸಲಾಗುತ್ತಿದೆ. |

**ಸಂಖ್ಯೆ: ನಅಇ 317 ಎಂಎನ್‌ಯು 2018**

(ಡಾ॥ ಜಿ.ಪರಮೇಶ್ವರ)
ಉಪ ಮುಖ್ಯಮಂತ್ರಿ